# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ದಾಸರಹಳ್ಳಿ ವಲಯದ ವಾರ್ಡ್ ಸಮಿತಿ ಸಭೆಯನ್ನು ದಿನಾಂಕ: 17.04.2021 ರಂದು ಮಲ್ಲಸಂದ್ರ ವಾರ್ಡ್ ನಂ.13 ರಲ್ಲಿ ನಡೆಸಲಾದ ವಾರ್ಡ್ ಸಭೆ ನಡವಳಿಕೆಗಳು

ದಿನಾಂಕ: 17.04.2021 ರಂದು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ದಾಸರಹಳ್ಳಿ ವಲಯದ ಮಲ್ಲಸಂದ್ರ ವಾರ್ಡ್ ಸಂಖ್ಯೆ 13 ರ ಕಛೇರಿಯಲ್ಲಿ ವಾರ್ಡ್ ಸಭೆಯನ್ನು ನಡೆಸಲಾಗಿದ್ದು, ಸದರಿ ಸಭೆಯಲ್ಲಿ ನೋಡಲ್ ಅಧಿಕಾರಿಗಳಾದ ಡಾ.ಸುರೇಶ್.ಎಸ್‌ರವರು, ಸಹಾಯಕ ಅಭಿಯಂತರರು ಹಾಗೂ ಸದಸ್ಯ ಕಾರ್ಯದರ್ಶಿಗಳಾದ ಶ್ರೀ ವೆಂಕಟೇಶಪ್ಪರವರು, ಆರೋಗ್ಯ ಇಲಾಖೆಯ ಶ್ರೀ ಪಾರ್ಥರವರು, ಘನತ್ಯಾಜ್ಯ ನಿರ್ವಹಣೆಯ ಶ್ರೀ ಲೋಹಿತ್‌ಕುಮಾರ್, ವಿದ್ಯುತ್ ಉಪವಿಭಾಗದಿಂದ ಶ್ರೀ ಚೇತನ್ (ಬೀದಿ ದೀಪ ನಿರ್ವಹಣೆ) ಬೆಂಗಳೂರು ಜಲ ಮಂಡಳಿಯಿಂದ ಶ್ರೀ ಲೋಕನಾಥ್, ಇನ್ಸ್‌ಪೆಕ್ಟರ್‌ರವರು, ತೋಟಗಾರಿಕಾ ಇಲಾಖೆಯಿಂದ ಶ್ರೀ ಶಿವಲಿಂಗೇಗೌಡರವರು, ಕಂದಾಯ ಇಲಾಖೆಯಿಂದ ಶ್ರೀ ಕುಮಾರಸ್ವಾಮಿರವರು, ಆರ್.ಐ, ಶ್ರೀ ಲಕ್ಷ್ಮೀಪತಿರವರು, ಶ್ರೀ ಭೈಲಪ್ಪರವರು, ಶ್ರೀ ಅಶೋಕ್‌ರವರು, ವಾರ್ಡ್ ಸಮಿತಿ ಸದಸ್ಯರು, ಶ್ರೀ ರೇಣುಕೇಶ್ವರ, ಶ್ರೀ ವೆಂಕಟರಾಯಪ್ಪರವರು, ಕಲ್ಯಾಣ ಇಲಾಖೆ ರವರು ಹಾಗೂ ಸಾರ್ವಜನಿಕರು ಹಾಜರಿದ್ದರು.

ಸದರಿ ಸಭೆಯಲ್ಲಿ ಈ ಕೆಳಕಂಡಂತೆ ನಿರ್ಣಯಗಳನ್ನು ತೀರ್ಮಾನಿಸಲಾಗಿದೆ.

- **ವಿದ್ಯುತ್ ವಿಭಾಗಕ್ಕೆ ಸಂಬಂಧಿಸಿದ ವಿಷಯಗಳ ಬಗ್ಗೆ**

1. ರವೀಂದ್ರ ನಗರ, ಮುನೇಶ್ವರ ಬ್ಲಾಕ್, ಕಲ್ಯಾಣನಗರ ವ್ಯಾಪ್ತಿಯಲ್ಲಿ ಬೀದಿ ದೀಪಗಳನ್ನು ತುರ್ತಾಗಿ ದುರಸ್ತಿಪಡಿಸಲು ಸೂಚಿಸಲಾಯಿತು.

- **ಕಂದಾಯ ಇಲಾಖೆಗೆ ಸಂಬಂಧಪಟ್ಟ ವಿಷಯಗಳ ಬಗ್ಗೆ**

ವಾರ್ಡ್ ನಂ. 13ರಲ್ಲಿ ಇರುವ ಮಲ್ಲಸಂದ್ರ ಕೆರೆಯ ಉಸ್ತುವರಿಯನ್ನು ಈಗಾಗಲೇ ಲೇಕ್ ಎ.ಇ.ಇ. ರವರು ಕೆರೆಯ ಬೌಂಡರಿಯನ್ನು ಮಾರ್ಕ್ ಮಾಡಿ ತೆರೆವುಗೋಳಿಸಲು ಸೂಚಿಸಿರುತ್ತಾರೆ. ಆದರೆ ವಾರ್ಡ್ ಸಮಿತಿಯ ಎಲ್ಲಾ ಸದಸ್ಯರು ಹಾಲಿ ಮಾಡಿರುವ ಮಾರ್ಕ್ ಸರಿ ಇಲ್ಲಾ ಅದ್ದರಿಂದ ಮತ್ತೊಮ್ಮೆ ಕೆರೆಯ ಸರ್ವೆ ಮಾಡಿ, ಗಡಿಯನ್ನು ಗುರುತಿಸಲು ಕೋರಿರುತ್ತಾರೆ. ಅದರಂತೆ ಕಂದಾಯ ಇಲಾಖೆಯ ಅಧಿಕಾರಿಗಳಿಗೆ ತುರ್ತಾಗಿ ಸರ್ವೆ ಮಾಡಿಸಿ ಕೆರೆಯ ಹದ್ದು ಬಸ್ತುನ್ನು ಫಿಕ್ಸ್ ಮಾಡಿಸಿಕೊಡಲು ಸಭೆಯಲ್ಲಿ ಸೂಚಿಸಲಾಯಿತು

- **ಆರೋಗ್ಯ ಇಲಾಖೆ ಹಾಗೂ ಘನತ್ಯಾಜ್ಯ ವಿಭಾಗಕ್ಕೆ ಸಂಬಂಧಪಟ್ಟ ವಿಷಯಗಳ ಬಗ್ಗೆ.**

ಆರೋಗ್ಯ ಇಲಾಖೆಯ ಶ್ರೀ ಪಾರ್ಥರವರು (ಹಿರಿಯ ಆರೋಗ್ಯ ಪರಿವೀಕ್ಷಕರು)

1. ಕರ್ನಾಟಕ ಸರ್ಕಾರದ ನಿರ್ದೇಶನದಂತೆ ಪ್ರತಿ ದಿನ ಕೋವಿಡ್–19 ಟೆಸ್ಟ್ ಮಾಡಲಾಗುತ್ತಿದೆ. ಲಿಂಕ್ ವರ್ಕರ್ಸ್‌ಗಳು ಆಸ್ಪತ್ರೆಯಿಂದ ಮೆಡಿಕಲ್ ಕಿಟ್‌ಗಳನ್ನು ಪಡೆದು ರೋಗಿಗಳ ಸ್ಥಳಕ್ಕೆ ನೀಡುವ ಕೆಲಸ ಮತ್ತು ಸಾರ್ವಜನಿಕ ಸ್ಥಳಗಳಲ್ಲಿ ಕ್ಯಾಂಪ್ ನಡೆಸುವ ಕಾರ್ಯವನ್ನು ಮಾಡುತ್ತಿದಾರೆ ಹಾಗು ವಾರದಲ್ಲಿ ಮೂರು ದಿವಸ ಹೋಮ್ ಕ್ವಾರೆಂಟೈನ್ ಆದವರನ್ನು ಬೇಟಿ ಮಾಡಿ ಯೋಗಕ್ಷೇಮ ವಿಚಾರಿಸುತ್ತಿದ್ದಾರೆ ಹಾಗೂ

Scanned by CamScanner

ಕೋವಿಡ್ ವ್ಯಾಕ್ಸಿನೇಷನ್‌ನ್ನು ಕೂಡಪ್ರತಿ ದಿವಸ ಮಲ್ಲಸಂದ್ರ ಪ್ರಾಥಮಿಕ ಕೇಂದ್ರದಲ್ಲಿ ನೀಡಲಾಗುತ್ತಿದೆ ಎಂದು ತಿಳಿಸಿದರು.

2. ವಾರ್ಡ್ ನಂ.13 ರ ಸಮಿತಿ ಸದಸ್ಯರಾದ ಭೈಲಪ್ಪರವರು ಮಾತನಾಡಿ ರವೀಂದ್ರನಗರದಲ್ಲಿ ತಮ್ಮ 2800 ಮನೆಗಳು ಇದ್ದು, ಕಸವನ್ನು ತೆಗೆಯಲು 2 ಬ್ಲಾಕ್ ಫಿಕ್ಸ್ ಮಾಡಿದ್ದಾರೆ, ಕಾನೂನಿನ ಪ್ರಕಾರ 750 ಮನೆಗಳಿಗೆ ಒಂದು ಬ್ಲಾಕ್ ಫಿಕ್ಸ್ ಮಾಡಿ ಹೆಚ್ಚುವರಿಯಾಗಿ 2 ಆಟೋಗಳನ್ನು ವ್ಯವಸ್ಥೆ ಮಾಡಲು ಕೋರಿರುತ್ತಾರೆ.

- ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆಗೆ ಸಂಬಂಧಪಟ್ಟ ವಿಷಯಗಳ ಬಗ್ಗೆ.

ಮಲ್ಲಸಂದ್ರ ವಾರ್ಡ್ ವ್ಯಾಪ್ತಿಯ ಹಾಗೂ 17ನೇ ಅಡ್ಡರಸ್ತೆಯಲ್ಲಿ ಸ್ಯಾನಿಟರಿ ಲೈನ್ ಸಮಸ್ಯೆ ಇದ್ದು, ದುರಸ್ಥಿಪಡಿಸಲು ಸೂಚಿಸಲಾಯಿತು ಹಾಗೂ 9ನೇ ಅಡ್ಡರಸ್ತೆ ರವೀಂದ್ರನಗರದಲ್ಲಿ ಹೊಸದಾಗಿ 1 ಮ್ಯಾನ್‌ಹೋಲ್ ಅವಶ್ಯಕತೆ ಇದ್ದು ತುರ್ತಾಗಿ ನಿರ್ಮಿಸಲು ಸೂಚಿಸಲಾಯಿತು.

ಇತರೆ ವಿಷಯಗಳು

1. ಶ್ರೀ ಗೋಪಾಲ್ ರವರು, ವಾರ್ಡ್ ಸಮಿತಿ ಸದಸ್ಯರು ಮಾತನಾಡಿ ಇನ್ನೇನು ಮಳೆಗಾಲ ಹತ್ತಿರದಲ್ಲಿ ಇರುವುದರಿಂದ ಇನ್ನು ಹೆಚ್ಚಿನ ಕೂಲಿ ಕಾರ್ಮಿಕರನ್ನು ಲೇಬರ್‌ಗಳನ್ನು ವ್ಯವಸ್ಥೆ ಮಾಡಿ ಚರಂಡಿಯಲ್ಲಿನ ಹೂಳನ್ನು ತೆಗೆಯಲು ಗುತ್ತಿಗೆದಾರರಿಗೆ ಸೂಚಿಸಲು ಸಲ್ಲಿಸಿದರು. ಅದರಂತೆ ಇಂದಿನಿಂದ ಹೆಚ್ಚುವರಿ ಕೂಲಿ ಕಾರ್ಮಿಕರು ಹೂಳನ್ನು ತೆಗೆಯುತ್ತಿದ್ದಾರೆ ಎಂದು ಸಹಾಯಕ ಇಂಜಿನಿಯರ್, ಬಿಬಿಎಂಪಿರವರು ತಿಳಿಸಿದರು.

2. ಹಾಲಿ ಕರೋನಾ ಪ್ರಕರಣಗಳ ಸಂಖ್ಯೆಯ ಬಗ್ಗೆ ಸೀನಿಯರ್ ಹೆಲ್ತ್ ಇನ್ಸ್‌ಪೆಕ್ಟರ್ ಪಾರ್ಥರವರು ಮಾತನಾಡಿ ಈ ಕೆಳಕಂಡಂತೆ ಅಂಕಿ ಅಂಶಗಳನ್ನು ನೀಡಿರುತ್ತಾರೆ.

| | |
|---|---|
| ವಾರ್ಡ್ ವ್ಯಾಪ್ತಿಯಲ್ಲಿ ಒಟ್ಟು ರೋಗಿಗಳ ಸಂಖ್ಯೆ: | 1363 |
| ವಾರ್ಡ್ ವ್ಯಾಪ್ತಿಯಲ್ಲಿ ಒಟ್ಟು ಡಿಸ್ಚಾರ್ಜ್ ರೋಗಿಗಳ ಸಂಖ್ಯೆ: | 1260 |
| ವಾರ್ಡ್ ವ್ಯಾಪ್ತಿಯಲ್ಲಿ ಒಟ್ಟು ಇಲ್ಲಿಯವರೆಗೆ ಸತ್ತವರ ಸಂಖ್ಯೆ: | 23 |
| ವಾರ್ಡ್ ವ್ಯಾಪ್ತಿಯಲ್ಲಿ ಒಟ್ಟು ಹಾಲಿ ಪ್ರಕರಣಗಳ ಸಂಖ್ಯೆ: | 80 |

ಸದ್ಯದ ಪರಿಸ್ಥಿತಿಯಲ್ಲಿ ಕರೋನಾ ಪ್ರಕರಣಗಳು ಹೆಚ್ಚಾಗದಂತೆ ತಡೆಯಲು ಬಿ.ಡಬ್ಲ್ಯೂ.ಎಸ್.ಎಸ್.ಬಿ ಕಛೇರಿ ವತಿಯಿಂದ ಜೆಟ್ ಮೇಷಿನ್‌ನ್ನು ಆರೋಗ್ಯ ಇಲಾಖೆ ವಶಕ್ಕೆ ಪಡೆದುಕೊಂಡು ಮೆಡಿಷನ್ ಸ್ಪ್ರೇಯಿಂಗ್ ಮಾಡಲು ವ್ಯವಸ್ಥೆ ಮಾಡಲು ಸೂಚಿಸಲಾಯಿತು ಮತ್ತು 45 ವಯಸ್ಸು ಹಾಗೂ ಮೇಲ್ಪಟ್ಟ ವಯಸ್ಸಿನವರು ಎಲ್ಲರೂ ತುರ್ತಾಗಿ ಕೋವಿಡ್ ವ್ಯಾಕ್ಸಿನೇಷನ್ ಪಡೆಯಲು ಹಾಗೂ ಪ್ರಚಾರಪಡಿಸಲು ಸಭೆಯಲ್ಲಿ ಸೂಚಿಸಿ ತೀರ್ಮಾನಿಸಲಾಯಿತು.

ನೋಡಲ್ ಅಧಿಕಾರಿಗಳು ಹಾಗೂ ಅಧ್ಯಕ್ಷರು,
ವಾರ್ಡ್ ಸಂಖ್ಯೆ.13 ಮಲ್ಲಸಂದ್ರ

ಸಹಾಯಕ ಅಭಿಯಂತರರು ಹಾಗೂ ಸದಸ್ಯ ಕಾರ್ಯದರ್ಶಿ
ವಾರ್ಡ್ ಸಂಖ್ಯೆ.13, ಮಲ್ಲಸಂದ್ರ

Scanned by CamScanner

ಪ್ರತಿಯನ್ನು:-

1. ಮಾನ್ಯ ಆಯುಕ್ತರು, ಬಿಬಿಎಂಪಿ ನರಸಿಂಹರಾಜ ಚೌಕ ರವರ ಮಾಹಿತಿಗಾಗಿ ಸಲ್ಲಿಸಲಾಗಿದೆ.
2. ಅಧ್ಯಕ್ಷರು ಸಾಮಾಜಿಕ ನ್ಯಾಯ ಸ್ಥಾಯಿ ಸಮಿತಿ ರವರ ಮಾಹಿತಿಗಾಗಿ ಸಲ್ಲಿಸಲಾಗಿದೆ.
3. ಮಾನ್ಯ ಜಂಟಿ ಆಯುಕ್ತರು, ದಾಸರಹಳ್ಳಿ ವಲಯ, ಬಿಬಿಎಂಪಿ ರವರ ಮಾಹಿತಿಗಾಗಿ ಸಲ್ಲಿಸಲಾಗಿದೆ.
4. ಕಾರ್ಯಪಾಲಕ ಅಭಿಯಂತರರು, ದಾಸರಹಳ್ಳಿ ವಿಭಾಗ, ಬಿಬಿಎಂಪಿ ರವರ ಮಾಹಿತಿಗಾಗಿ ಸಲ್ಲಿಸಲಾಗಿದೆ.
5. ಕಾರ್ಯಪಾಲಕ ಅಭಿಯಂತರರು, (ಯೋಜನಾ ವಿಭಾಗ) ದಾಸರಹಳ್ಳಿ ವಿಭಾಗ, ಬಿಬಿಎಂಪಿ ರವರ ಮಾಹಿತಿಗಾಗಿ ಸಲ್ಲಿಸಲಾಗಿದೆ.
6. ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ, ದಾಸರಹಳ್ಳಿ ವಿಭಾಗ, ಬಿಬಿಎಂಪಿ ರವರ ಮಾಹಿತಿಗಾಗಿ ಸಲ್ಲಿಸಲಾಗಿದೆ.
7. ಕಾರ್ಯಪಾಲಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ ದಾಸರಹಳ್ಳಿ ವಿಭಾಗ, ಬಿಬಿಎಂಪಿ ರವರ ಮಾಹಿತಿಗಾಗಿ ಸಲ್ಲಿಸಲಾಗಿದೆ.
8. ಕಾರ್ಯಪಾಲಕ ಅಭಿಯಂತರರು, ಎಸ್.ಡಬ್ಲ್ಯೂ.ಎಂ. ದಾಸರಹಳ್ಳಿ ವಿಭಾಗ, ಬಿಬಿಎಂಪಿ ರವರ ಮಾಹಿತಿಗಾಗಿ ಸಲ್ಲಿಸಲಾಗಿದೆ.
9. ಕಲ್ಯಾಣಾಧಿಕಾರಿಗಳು, ದಾಸರಹಳ್ಳಿ ವಿಭಾಗ, ಬಿಬಿಎಂಪಿ ರವರ ಮಾಹಿತಿಗಾಗಿ ಸಲ್ಲಿಸಲಾಗಿದೆ.
10. ಸಹಾಯಕ ನಿರ್ದೇಶಕರು, (ಪಶುಪಾಲನೆ) ದಾಸರಹಳ್ಳಿ ವಲಯ, ಬಿಬಿಎಂಪಿ ರವರ ಮಾಹಿತಿಗಾಗಿ ಸಲ್ಲಿಸಲಾಗಿದೆ.
11. ಸಹ ಕಂದಾಯ ಅಧಿಕಾರಿ, ಮಲ್ಲಸಂದ್ರ ಉಪವಿಭಾಗ, ದಾಸರಹಳ್ಳಿ ವಿಭಾಗ, ಬಿಬಿಎಂಪಿ ರವರ ಮಾಹಿತಿಗಾಗಿ ಸಲ್ಲಿಸಲಾಗಿದೆ.

Scanned by CamScanner